ತಿ೧

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1310 (1407)
ಮಾನ್ಯ ಸದಸ್ಯರ ಹೆಸರು : ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು
ಉತ್ತರಿಸಬೇಕಾದ ದಿನಾಂಕ : 18.12.2025

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಗ್ರಾಮೀಣ ಕೃಪಾಂಕ ರಹಿತ ನೌಕರರಿಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಆದೇಶದ ಅನ್ವಯ ಜಾರಿಗೊಳಿಸಲು ಯಾವ ಕ್ರಮವನ್ನು ಕೈಗೊಳ್ಳಲಾಗಿದೆ; (ವಿವರವಾದ ಮಾಹಿತಿ ನೀಡುವುದು) | ಗ್ರಾಮೀಣ ಕೃಪಾಂಕಕ್ಕೆ ಸಂಬಂಧಿಸಿದಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ (ಸಿವಿಲ್) 463/2002 ಶ್ರೀ ವಿಠಲ್ ಮತ್ತು ಇತರರು ವಿರುದ್ಧ ರಾಜ್ಯ ಸರ್ಕಾರ ಪ್ರಕರಣದಲ್ಲಿ ದಿನಾಂಕ 06.05.2003 ರಂದು ನೀಡಿದ ತೀರ್ಪಿನ ಹಿನ್ನೆಲೆಯಲ್ಲಿ ಸರ್ಕಾರ ದಿನಾಂಕ 02.07.2003ರ ಸುತ್ತೋಲೆ ಸಂಖ್ಯೆ : ಸಿಆಸುಇ 45 ಸೆನೆನಿ 2003 ರಲ್ಲಿ ಈ ಕೆಳಕಂಡಂತೆ ಸೂಚನೆಗಳನ್ನು ನೀಡಲಾಗಿರುತ್ತದೆ:<br><br>(ಎ) ದಿನಾಂಕ 11.11.1998ರ ನಂತರ ಗ್ರಾಮೀಣ ಕೃಪಾಂಕದ ಸೌಲಭ್ಯದೊಂದಿಗೆ ನೇಮಕಾತಿ (appointment) ಹೊಂದಿರುವ ಎಲ್ಲಾ ಅಭ್ಯರ್ಥಿಗಳ ಆಯ್ಕೆ ಪಟ್ಟಿಗಳನ್ನು ಗ್ರಾಮೀಣ ಕೃಪಾಂಕ ರಹಿತವಾಗಿ ಪರಿಷ್ಕರಿಸಿ, ಪರಿಷ್ಕೃತ ಆಯ್ಕೆ ಪಟ್ಟಿಗಳನ್ನು ಪ್ರಕಟಿಸಲು ಕ್ರಮ ತೆಗೆದುಕೊಳ್ಳತಕ್ಕದ್ದು;<br><br>(ಬಿ) ಪರಿಷ್ಕೃತ ಆಯ್ಕೆ ಪಟ್ಟಿಯಲ್ಲಿ ಸ್ಥಾನ ಪಡೆಯಲಾಗದ ಅಭ್ಯರ್ಥಿಗಳನ್ನು ಸೇವೆಯಿಂದ ತೆಗೆದುಹಾಕಲು ಕ್ರಮ ತೆಗೆದುಕೊಳ್ಳತಕ್ಕದ್ದು;<br><br>(ಸಿ) ಪರಿಷ್ಕೃತ ಆಯ್ಕೆ ಪಟ್ಟಿಯಲ್ಲಿ ಹೊಸದಾಗಿ ಸೇರ್ಪಡೆಯಾದ ಅಭ್ಯರ್ಥಿಗಳನ್ನು ಸೇವೆಯಿಂದ ತೆಗೆದುಹಾಕಿದ ಅಭ್ಯರ್ಥಿಗಳ ಸ್ಥಾನದಲ್ಲಿ ಭವಿಷ್ಯವರ್ತಿಯಾಗಿ ಜಾರಿಗೆ ಬರುವಂತೆ ನೇಮಕಾತಿ ಮಾಡಲು ಕ್ರಮ ತೆಗೆದುಕೊಳ್ಳತಕ್ಕದ್ದು.<br><br>ಮಾನ್ಯ ಸರ್ವೋಚ್ಚ ನ್ಯಾಯಾಲಯವು ರಿಟ್ ಅರ್ಜಿ (ಸಿವಿಲ್) ಸಂಖ್ಯೆ 386/2014- ಶ್ರೀ.ಎಸ್.ಆರ್. ಮಾಣಿಕ್ಯ ಮತ್ತು ಇತರರು ವಿರುದ್ಧ ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯ ಪ್ರಕರಣದಲ್ಲಿ ದಿನಾಂಕ 20.11.2015 ರಂದು ನೀಡಿರುವ ಆದೇಶದಲ್ಲಿ, ರಿಟ್ ಅರ್ಜಿ (ಸಿವಿಲ್) ಸಂಖ್ಯೆ 463/2002 ಶ್ರೀ ವಿಠಲ್ ಮತ್ತು ಇತರರು ಪ್ರಕರಣದಲ್ಲಿ ದಿನಾಂಕ 06.05.2003 ರಂದು ಹಿಂದೆ ನೀಡಿದ್ದ ತನ್ನ ತೀರ್ಪನ್ನು ಎತ್ತಿ ಹಿಡಿದಿರುತ್ತದೆ. |
| ಆ) | ಸುಪ್ರೀಂ ಕೋರ್ಟ್ ಆದೇಶ ಕೃಪಾಂಕ ರಹಿತ ಸಮಸ್ಯೆಯಿಂದ ಬಾಧಿತರಾಗಿರುವ ಪ್ರೌಢಶಾಲಾ ಶಿಕ್ಷಕರು ಸೇರಿದಂತೆ ಎಲ್ಲಾ ನೌಕರರಿಗೂ ಅನ್ವಯವಾಗುತ್ತದೆಯೇ; | ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಕೆ.ಎ.ಟಿ. ಅರ್ಜಿ ಸಂಖ್ಯೆ: 2724-2777/2011 ಶ್ರೀ ಗುರುಸಿದ್ದಪ್ಪ ಮತ್ತು ಇತರರು ವಿರುದ್ಧ ರಾಜ್ಯ ಸರ್ಕಾರ ಪ್ರಕರಣದಲ್ಲಿ ನ್ಯಾಯ ಮಂಡಳಿಯು ದಿನಾಂಕ: 21.11.2012 ರಂದು ನೀಡಿರುವ ಆದೇಶವನ್ನು ಅನುಷ್ಠಾನ ಮಾಡುವ ಕುರಿತು ಆರ್ಥಿಕ ಇಲಾಖೆಯ ಸಹಮತಿ ಪಡೆದು, ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಗ್ರಾಮೀಣ ಕೃಪಾಂಕ ರಹಿತವಾಗಿ |

| | | |
|---|---|---|
| | | ನೇಮಕಗೊಂಡಿರುವ ಶಿಕ್ಷಕರಿಗೆ ಸೇವೆಗೆ ಸೇರಿದ ದಿನಾಂಕದಿಂದ ಇಲ್ಲಿಯವರೆಗೆ ವೇತನ ವ್ಯತ್ಯಾಸದ ಬಾಕಿಯನ್ನು ಪಾವತಿಸುವಲ್ಲಿ ಬಾಕಿ ವೇತನದ ವ್ಯತ್ಯಾಸ ಲೆಕ್ಕಾಚಾರವನ್ನು ಸರ್ಕಾರದಿಂದ ದೃಢೀಕರಿಸಿಕೊಳ್ಳುವ ಷರತ್ತಿಗೊಳಪಟ್ಟು, ಸರ್ಕಾರದ ಆದೇಶ ಸಂಖ್ಯೆ: ಇಪಿ 78 ಪಿಎಂಡಬ್ಲ್ಯೂ 2025, ದಿನಾಂಕ: 11.07.2025ರಲ್ಲಿ ಮಾನ್ಯ ನ್ಯಾಯಮಂಡಳಿಯ ಆದೇಶವನ್ನು ಅನುಷ್ಠಾನ ಮಾಡಲು ಸರ್ಕಾರವು ಅನುಮತಿಸಿ ಆದೇಶಿಸಲಾಗಿರುತ್ತದೆ.<br>ಸರ್ಕಾರದ ಆದೇಶ ಸಂಖ್ಯೆ: ಇಪಿ 78 ಪಿಎಂಡಬ್ಲ್ಯೂ 2025, ದಿನಾಂಕ:11.07.2025 ರಂತೆ ಸಂಬಂಧಪಟ್ಟ ಶಿಕ್ಷಕರಿಗೆ ಮೂಲತ: ಸೇವೆಗೆ ಸೇರಿದ ದಿನಾಂಕದಿಂದ ಇಲ್ಲಿಯವರೆಗೆ ಬಾಕಿಯನ್ನು ಪಾವತಿಸುವಲ್ಲಿ ಲೆಕ್ಕಾಚಾರವನ್ನು ಕೂಲಂಕಷವಾಗಿ ಪರಿಶೀಲಿಸಿ ಖಚಿತಪಡಿಸಿಕೊಳ್ಳುವಂತೆ ಸೂಚಿಸಲಾಗಿದೆ ಹಾಗೂ ಸದರಿ ಲೆಕ್ಕಾಚಾರವನ್ನು ಸರ್ಕಾರದಿಂದ ದೃಢೀಕರಿಸಿಕೊಳ್ಳುವಂತೆ ಸ್ಪಷ್ಟವಾಗಿ ಸೂಚಿಸಲಾಗಿದೆ.<br>ಸರ್ಕಾರದ ಆದೇಶ ಸಂಖ್ಯೆ: ಇಪಿ 78 ಪಿಎಂಡಬ್ಲ್ಯೂ 2025, ದಿನಾಂಕ:11.07.2025 ರ ಆದೇಶದಲ್ಲಿ ಉಲ್ಲೇಖಿಸಲಾಗಿರುವ ಮಾನ್ಯ ನ್ಯಾಯಾಲಯದ ಆದೇಶದನ್ವಯ ಸದರಿ ಆದೇಶವು ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಮಾತ್ರ ಅನ್ವಯವಾಗುತ್ತದೆ |
| ಇ) | ಆದೇಶ ಅನುಷ್ಠಾನಕ್ಕೆ ಕಾಲಮಿತಿ ನೀಡಲಾಗಿದೆಯೇ; | ಹೌದು |
| ಈ) | ಸುಪ್ರೀಂ ಕೋರ್ಟ್ ಆದೇಶದ ಅನ್ವಯ ಸೇವಾ ಹಿರಿತನದ ಪಟ್ಟಿ ಪ್ರಕಟಿಸಲು ಕ್ರಮ ಕೈಗೊಳ್ಳಲಾಗಿದೆಯೇ; | ಕೆ.ಎ.ಟಿ. ಆದೇಶವನ್ನು ಅನುಷ್ಠಾನಗೊಳಿಸಲು ಸರ್ಕಾರದಿಂದ ಅನುಮತಿ ನೀಡಲಾಗಿದ್ದು, ಆಯಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ) ಹಾಗೂ ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳ ಹಂತದಲ್ಲಿ ಕ್ರಮವಹಿಸಲಾಗುತ್ತಿದೆ |
| ಉ) | ವೇತನ ಮರು ನಿಗದಿ ಮಾಡಿದ ನಂತರದಲ್ಲಿ ಬರಿಸಬೇಕಾಗಿರುವ ವ್ಯತ್ಯಾಸದ ಮೊತ್ತವನ್ನು ಬಿಡುಗಡೆ ಮಾಡುವುದು ಯಾವಾಗ? | ದಿನಾಂಕ: 11.07.2025ರ ಆದೇಶದಲ್ಲಿ ಸೂಚಿಸಿರುವಂತೆ ಪ್ರತಿಯೊಂದು ಪ್ರಕರಣದಲ್ಲಿಯೂ ವೇತನ ವ್ಯತ್ಯಾಸದ ಲೆಕ್ಕಾಚಾರವನ್ನು ಸರ್ಕಾರದಿಂದ ದೃಢೀಕರಿಸಿದ ನಂತರದಲ್ಲಿ ವ್ಯತ್ಯಾಸದ ಮೊತ್ತದ ಬಿಡುಗಡೆಗೆ ನಿಯಮಾನುಸಾರ ಕ್ರಮವಹಿಸಲಾಗುವುದು. |

**ಸಂಖ್ಯೆ: ಸಿಆಸುಇ 409 ಸೇನೆನಿ 2025**

(ಸಿದ್ಧರಾಮಯ್ಯ)
ಮುಖ್ಯಮಂತ್ರಿ